ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ : ಪಪೂಶಿಇ/ಶೈಶಾ-02/ಬುಕ್.ಬ್ಯಾಂ.ಸ್ಥಾ/2022-23 ದಿನಾಂಕ 17 -06-2022

ನೆನಪೋಲೆ.

## ಸುತ್ತೋಲೆ

ವಿಷಯ : 2022-23 ನೇ ಸಾಲಿಗೆ ಪದವಿ ಪೂರ್ವ ಕಾಲೇಜುಗಳಲ್ಲಿ ಬುಕ್ ಬ್ಯಾಂಕ್ ಸ್ಥಾಪಿಸುವ ಬಗ್ಗೆ.

ಉಲ್ಲೇಖ :1. ದಿನಾಂಕ:21.05.2022ರಂದು ನಡೆದ ಎಂಪಿಕ್ ಸಭೆಯಲ್ಲಿ ಚರ್ಚಿಸಿದಂತೆ.

2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ: ಪಪೂಶಿಇ/ಶೈಶಾ-02/ ಬುಕ್.ಬ್ಯಾಂ.ಸ್ಥಾ/2022-23, ದಿನಾಂಕ: 30.05.2022.

*******

2022-23ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಈ ಹಿಂದಿನ ವರ್ಷಗಳಲ್ಲಿ ಎಸ್‌ಸಿಎಸ್‌ಪಿ / ಟಿಎಸ್‌ಪಿ ಬುಕ್‌ಬ್ಯಾಂಕ್ ಯೋಜನೆಯಡಿಯಲ್ಲಿ ಪಠ್ಯಪುಸ್ತಕಗಳನ್ನು ಸರಬರಾಜು ಮಾಡಲಾಗಿದ್ದು ಸದರಿ ಪುಸ್ತಕಗಳನ್ನು ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ವಿತರಿಸಲು ಹಾಗೂ ಕಾಲೇಜುಗಳಲ್ಲಿ ಅಧ್ಯಯನ ಮಾಡಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಪುಸ್ತಕಗಳನ್ನು ಸಂಗ್ರಹಿಸಿ ಅಗತ್ಯವಿರುವ ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ವಿತರಿಸಲು ಕ್ರಮತೆಗೆದುಕೊಳ್ಳುವುದು. ಈ ಸಂಬಂಧ ಪ್ರತೀ ಕಾಲೇಜಿನಲ್ಲಿ ಒಬ್ಬ ಉಪನ್ಯಾಸಕರಿಗೆ ಈ ಜವಾಬ್ದಾರಿಯನ್ನು ವಹಿಸುವುದು. ಬುಕ್ ಬ್ಯಾಂಕ್ ಸ್ಥಾಪಿಸುವಂತೆ ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:30.05.2022ರಲ್ಲಿ ಸೂಚಿಸಲಾಗಿತ್ತು. ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಪದವಿ ಪೂರ್ವ ಕಾಲೇಜುಗಳಲ್ಲಿ ಸ್ಥಳೀಯವಾಗಿ ಬುಕ್ ಬ್ಯಾಂಕ್ ಸ್ಥಾಪಿಸಿರುವ ಬಗ್ಗೆ ಕೈಗೊಂಡ ಕ್ರಮದ ಬಗ್ಗೆ ವರದಿಯನ್ನು ನೀಡುವಂತೆ ಈ ಮೂಲಕ ಸೂಚಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಕ್ರಮಕ್ಕಾಗಿ:

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ.
2. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಸಹಾಯಕ ನಿರ್ದೇಶಕರು, ಇ-ಆಡಳಿತ- ಇವರಿಗೆ ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲು.

ಮಾಹಿತಿಗಾಗಿ.

4. ಮಾನ್ಯ ನಿರ್ದೇಶಕರ ಆಪ್ತಶಾಖೆ.
5. ಕಛೇರಿ ಪ್ರತಿ.